# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 449
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 13/12/2018
ಉತ್ತರಿಸುವ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದೈಹಿಕ ಶಿಕ್ಷಣ ಉನ್ನತೀಕರಣಕ್ಕಾಗಿ ಪ್ರೊ: ವೈದ್ಯನಾಥನ್‌ರವರ ವರದಿಗೆ ಸರ್ಕಾರ ಒಪ್ಪಿಗೆ ನೀಡಲಾಗಿದೆಯೇ? | ಹೌದು |
| ಆ) | ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಸರ್ಕಾರ ತೀರ್ಮಾನಿಸಲಾಗಿದೆಯೇ? | ಹೌದು |
| ಇ) | ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿಯಲ್ಲಿ ಯಾವ ಯಾವ ಅಂಶಗಳಲ್ಲಿ ಬದಲಾವಣೆ ತರಲಾಗಿದೆ; (ವಿವರ ನೀಡುವುದು) | ಈ ಕೆಳಕಂಡ ಹುದ್ದೆಗಳ ಕುರಿತು ತಿದ್ದುಪಡಿ ತರಲಾಗಿದೆ. (ಕೆಳಗಿನ ಕೋಷ್ಟಕ ನೋಡಿ) |

| ಈ ಹಿಂದೆ ಇದ್ದ ಹುದ್ದೆಗಳು | ಉನ್ನತೀಕರಿಸಿದ ಹುದ್ದೆಗಳು |
|---|---|
| ಉಪನಿರ್ದೇಶಕರು (ದೈಹಿಕ ಶಿಕ್ಷಣ) | ಜಂಟಿ ನಿರ್ದೇಶಕರು (ದೈಹಿಕ ಶಿಕ್ಷಣ) |
| ವಿಭಾಗೀಯ ದೈಹಿಕ ಶಿಕ್ಷಣ ಅಧೀಕ್ಷಕರು | ವಿಭಾಗೀಯ ಉಪನಿರ್ದೇಶಕರು (ದೈಹಿಕ ಶಿಕ್ಷಣ) |
| ಜಿಲ್ಲಾ ದೈಹಿಕ ಶಿಕ್ಷಣ ಅಧೀಕ್ಷಕರು | ಜಿಲ್ಲಾ ಅಧಿಕಾರಿಗಳು, ಕ್ರೀಡೆ ಮತ್ತು ದೈಹಿಕ ಶಿಕ್ಷಣ |
| ಶಿಕ್ಷಣ ಸಂಯೋಜಕರು (ದೈಹಿಕ ಶಿಕ್ಷಣ) ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ | ದೈಹಿಕ ಶಿಕ್ಷಣ ಪರಿವೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ |

ಪ್ರಸ್ತುತ. ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-1 ಪದನಾಮವನ್ನು "ಸಹ ಶಿಕ್ಷಕರು" (ದೈಹಿಕ ಶಿಕ್ಷಣ) ಗ್ರೇಡ್-1 ಎಂದು ತಿದ್ದುಪಡಿ ಮಾಡಲು ಸಮಗ್ರ ತಿದ್ದುಪಡಿ ಪ್ರಸ್ತಾವನೆಯಲ್ಲಿ ಪ್ರಸ್ತಾಪಿಸಲಾಗಿದೆ.

..2

| | | |
|---|---|---|
| ಈ) | ಯಾವ ಕಾಲಮಿತಿಯಲ್ಲಿ ತಿದ್ದುಪಡಿ ಮಾಡಲಾಗುವುದು? | ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ತಿದ್ದುಪಡಿ ಪ್ರಸ್ತಾವನೆ ಕುರಿತಂತೆ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಈಗಾಗಲೇ ವೃಂದ ಪರಿಶೀಲನಾ ಸಮಿತಿ ಸಭೆ ನಡೆದಿದ್ದು, ಕೆಲವೊಂದು ಮಾರ್ಪಡುಗಳೊಂದಿಗೆ ತಿದ್ದುಪಡಿ ತರಲು ಸಭೆಯು ಒಪ್ಪಿಗೆ ನೀಡಿರುತ್ತದೆ. ಪ್ರಸ್ತುತ ತಿದ್ದುಪಡಿ ಪ್ರಸ್ತಾವನೆ ಕುರಿತು ಆರ್ಥಿಕ ಇಲಾಖೆ, ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ ಸಿಆಸು ಇಲಾಖೆಗಳು ಸಹಮತಿ ನೀಡಬೇಕಿದ್ದು, ಸದರಿ ಇಲಾಖೆಗಳು ಸಹಮತಿ/ಅಭಿಪ್ರಾಯ ನೀಡಿದ ನಂತರ ಸಚಿವ ಸಂಪುಟದ ಒಪ್ಪಿಗೆ ಪಡೆದು ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ತಿದ್ದುಪಡಿಯ ಕರಡನ್ನು ಪ್ರಕಟಿಸಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಇಡಿ 192 ಡಿಎಆರ್ 2018.**

(ಹೆಚ್.ಡಿ. ಕುಮಾರಸ್ವಾಮಿ)
ಮುಖ್ಯ ಮಂತ್ರಿ